# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ತೆಂಗಿನ ನಾರಿನ ವಲಯಕ್ಕೆ ನೀಡುತ್ತಿರುವ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆಗೆ ಮರು ರೂಪಿಸಿದ ಮಾರ್ಗಸೂಚಿಯೊಂದಿಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** 1. ಆಯುಕ್ತರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ನಿರ್ದೇಶನಾಲಯ, ಇವರ ಪತ್ರ ಸಂಖ್ಯೆ: ಕೈವಾಇ/ಗ್ರಾಕೈ&ಸ್ವಉಕಾ/ಅಧೀ /ತೆಂಗಾಅ/21/2018-19, ದಿ: 17.07.2018.

2. ಸರ್ಕಾರದ ಆದೇಶ ಸಂ: ಸಿಐ 112 ಸಿಎಸ್‌ಸಿ 2016 (ಭಾಗ-2), ಬೆಂಗಳೂರು, ದಿ: 30.08.2016

*****

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣ (ಜುಲೈ 2018) ರ ಕಂಡಿಕೆ 105 ರಲ್ಲಿ ***"ಕರ್ನಾಟಕದಲ್ಲಿ ತೆಂಗಿನ ನಾರಿನ ಉತ್ಪನ್ನಗಳ ತಯಾರಿಕೆಗೆ ಹೆಚ್ಚಿನ ಅವಕಾಶಗಳಿದ್ದು ಹಾಗೂ ಹೇರಳವಾದ ಕಚ್ಚಾ ಸಾಮಗ್ರಿಗಳು ದೊರಕುವುದರಿಂದ, ಈ ವಲಯಕ್ಕೆ ಇನ್ನೂ ಹೆಚ್ಚಿನ ಉತ್ತೇಜನ ನೀಡಲು, ಸೂಕ್ಷ್ಮ ಮತ್ತು ಸಣ್ಣ ತೆಂಗಿನ ನಾರಿನ ಕೈಗಾರಿಕೆಗಳು ಉತ್ಪಾದಿಸುವ ಉತ್ಪನ್ನಗಳಿಗೆ ಶೇ.10ರ ದರದಲ್ಲಿ ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು ನೀಡಲಾಗುವುದು"*** ಎಂದು ಘೋಷಿಸಲಾಗಿದೆ.

ಈಗಾಗಲೇ ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ನಿ., ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ಮತ್ತು ತೆಂಗಿನನಾರಿನ ಪ್ರಾಥಮಿಕ ಸಹಕಾರ ಸಂಘಗಳಿಗೆ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆಯಡಿ ಸಂಸ್ಥೆಗಳ ಒಟ್ಟು ವಹಿವಾಟಿನ ಮೇಲೆ ಉತ್ತೇಜನ ಧನವಾಗಿ ಶೇ. 10 ರಷ್ಟು ಅನುದಾನವನ್ನು ನೀಡಲಾಗುತ್ತಿದ್ದು, ಇದರಲ್ಲಿ ಶೇ. 5 ರಷ್ಟು ಅನುದಾನವನ್ನು ಕೇಂದ್ರ ಸರ್ಕಾರದಿಂದ ಹಾಗೂ ಶೇ. 5 ರಷ್ಟು ಅನುದಾನವನ್ನು ರಾಜ್ಯ ಸರ್ಕಾರದಿಂದ ಭರಿಸಲಾಗುತ್ತಿತ್ತು. ಪ್ರಸ್ತುತ ಕೇಂದ್ರ ಸರ್ಕಾರದ ತೆಂಗಿನ ನಾರಿನ ಮಂಡಳಿಯವರು ದಿ: 15.03.2018ರ ಪತ್ರದಲ್ಲಿ ಕೇಂದ್ರ ಸರ್ಕಾರವು ತನ್ನ ಪಾಲಿನ ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು 2017-18ನೇ ಸಾಲಿನಿಂದ ನೀಡಲಾಗುವುದಿಲ್ಲವೆಂದು ತಿಳಿಸಿರುತ್ತದೆ.

2018-19ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಉಲ್ಲೇಖ(1)ರ ಪತ್ರದಲ್ಲಿ ಆಯುಕ್ತರು, ಎಂ.ಎಸ್.ಎಂ.ಇ., ಇವರು ಮೇಲೆ ಓದಲಾದ ಉಲ್ಲೇಖ(2)ರ ಆದೇಶದ ಮಾರ್ಗಸೂಚಿಗಳನ್ನು ಕೆಳಕಂಡಂತೆ ಭಾಗಶಃ ಸೂಕ್ತ ಮಾರ್ಪಾಡುಗಳನ್ನು ಮಾಡಿ ಯೋಜನೆಯ ಮಾರ್ಗಸೂಚಿಗಳನ್ನು ಹೊರಡಿಸಲು ಕೋರಿ ಪ್ರಸ್ತಾವನೆಯನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

1) ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆಯಡಿ ಅನುದಾನ ಪಡೆಯಲು ಹಾಲಿ ಅರ್ಹವಿರುವ ಸಂಸ್ಥೆಗಳಾದ ಕರ್ನಾಟಕ ರಾಜ್ಯ ತೆಂಗಿನನಾರಿನ ಅಭಿವೃದ್ಧಿ ನಿಗಮ,

1/12/18

100
3/12/18

ಕರ್ನಾಟಕ ರಾಜ್ಯ ತೆಂಗಿನನಾರಿನ ಸಹಕಾರ ಮಹಾಮಂಡಳಿ ಮತ್ತು ತೆಂಗಿನನಾರಿನ ಪ್ರಾಥಮಿಕ ಸಹಕಾರ ಸಂಘಗಳ ಜೊತೆಗೆ ಸೂಕ್ಷ್ಮ ಮತ್ತು ಸಣ್ಣ ತೆಂಗಿನನಾರಿನ ಕೈಗಾರಿಕೆಗಳನ್ನು ಸೇರ್ಪಡಿಸುವುದು.

2) ಮೇಲೆ ತಿಳಿಸಿದ ತೆಂಗಿನನಾರಿನ ಸಂಸ್ಥೆಗಳು ಮತ್ತು ಕೈಗಾರಿಕೆಗಳು ಹಿಂದಿನ ಮೂರು ವರ್ಷಗಳಲ್ಲಿ ನಡೆಸಿದ ವಹಿವಾಟಿನ ಸರಾಸರಿಯಲ್ಲಿ ಶೇ.10 ರಷ್ಟು ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು ಸಂಪೂರ್ಣವಾಗಿ ರಾಜ್ಯ ಸರ್ಕಾರದಿಂದ ಭರಿಸುವುದು.

3) ಮಾರುಕಟ್ಟೆ ಅಭಿವೃದ್ಧಿ ಸಹಾಯಧನದ ಮೊತ್ತವನ್ನು ನಿಗದಿ ಪಡಿಸುವ ಬಗ್ಗೆ ಹಾಲಿ ಪಾಲಿಸಲಾಗುತ್ತಿರುವ ತೆಂಗಿನನಾರಿನ ಮಂಡಳಿಯು ನಿಗದಿ ಪಡಿಸಿದ ಮಾರ್ಗಸೂಚಿಗಳನ್ನು ಪಾಲಿಸುವುದು.

4) ಕರ್ನಾಟಕ ರಾಜ್ಯ ತೆಂಗಿನನಾರಿನ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ತೆಂಗಿನನಾರಿನ ಸಹಕಾರ ಮಹಾಮಂಡಳಿಯವರ ಪ್ರಸ್ತಾವನೆಗಳನ್ನು ಕೇಂದ್ರ ಕಚೇರಿಯ ಮಟ್ಟದಲ್ಲಿ ಮಂಜೂರು ಮಾಡುವುದು ಮತ್ತು ತೆಂಗಿನನಾರಿನ ಪ್ರಾಥಮಿಕ ಸಹಕಾರ ಸಂಘಗಳು ಹಾಗೂ ಸೂಕ್ಷ್ಮ ಮತ್ತು ಸಣ್ಣ ತೆಂಗಿನನಾರಿನ ಕೈಗಾರಿಕೆಗಳ ಪ್ರಸ್ತಾವನೆಗಳನ್ನು ಸಂಬಂಧಪಟ್ಟ ಜಿಲ್ಲಾ ಕೈಗಾರಿಕಾ ಕೇಂದ್ರದ ರಿಯಾಯಿತಿ ಮತ್ತು ಪ್ರೋತ್ಸಾಹಧನಗಳ ಮಂಜೂರು ಮಾಡುವ ಜಿಲ್ಲಾ ಮಟ್ಟದ ಸಮಿತಿಯಲ್ಲಿ ಮಂಜೂರು ಮಾಡುವುದು.

2018–19ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ–105ರ ಕುರಿತು ಆರ್ಥಿಕ ಇಲಾಖೆ ಮತ್ತು ಯೋಜನಾ ಇಲಾಖೆಗಳು ನೀಡಿರುವ ಅಭಿಪ್ರಾಯದ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 77 ಸಿಎಸ್‌ಸಿ 2018, ಬೆಂಗಳೂರು, ದಿನಾಂಕ: 27.10.2018.**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ವಯ, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ನಿ., ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ತೆಂಗಿನ ನಾರಿನ ಪ್ರಾಥಮಿಕ ಸಹಕಾರ ಸಂಘಗಳು ಹಾಗೂ ಸೂಕ್ಷ್ಮ ಮತ್ತು ಸಣ್ಣ ತೆಂಗಿನನಾರಿನ ಕೈಗಾರಿಕೆಗಳು ಈ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆಯಡಿ ಸಂಸ್ಥೆಗಳ ಹಿಂದಿನ ಮೂರು ವರ್ಷಗಳ ಸರಾಸರಿ ವಾರ್ಷಿಕ ವಹಿವಾಟಿನ ಮೇಲೆ ಉತ್ತೇಜನ ಧನವಾಗಿ ಶೇ. 10 ರಷ್ಟು ಅನುದಾನವನ್ನು ಸಂಪೂರ್ಣವಾಗಿ ರಾಜ್ಯ ಸರ್ಕಾರದಿಂದ "ಮಾರುಕಟ್ಟೆ ಅಭಿವೃದ್ಧಿ ಯೋಜನೆ"ಯ ಲೆಕ್ಕಶೀರ್ಷಿಕೆ 2851–00–106–0–11 (059) ಇತರೆ ವೆಚ್ಚಗಳು ಅಡಿಯಲ್ಲಿ ನೀಡುವ ಅನುದಾನಕ್ಕೆ ಮತ್ತು ಅದರ ಸದ್ಬಳಕೆಗೆ ಈ ಆದೇಶದಲ್ಲಿ ಅನುಬಂಧ–1ರಲ್ಲಿ ನೀಡಿರುವಂತೆ ಮರು ರೂಪಿಸಿದ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯನ್ನು ಈ ಆದೇಶದಲ್ಲಿ ಅನುಮೋದಿಸಲಾಗಿರುವ ಮಾರ್ಗಸೂಚಿಗಳನ್ವಯ 2018–19ನೇ ಸಾಲಿನಲ್ಲಿ ಹಂಚಿಕೆಯಾಗಿರುವ ಅನುದಾನದ ಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ಸಂದರ್ಭದಲ್ಲಿಯೂ (ತೆಂಗಿನ ನಾರಿನ ನಿಗಮ ಮತ್ತು ತೆಂಗಿನ ನಾರಿನ ಸಹಕಾರಿ

ಮಹಾಮಂಡಳಿ ಹೊರತುಪಡಿಸಿ) ಸೂಕ್ಷ್ಮ ಮತ್ತು ಸಣ್ಣ ತೆಂಗಿನ ನಾರಿನ ಕೈಗಾರಿಕಾ ಘಟಕಗಳಿಗೆ ಎಂ.ಡಿ.ಎ. ಒಟ್ಟಾರೆ ಮೊತ್ತ ರೂ. 2.00 ಕೋಟಿ ಮೀರಬಾರದು.

ಈ ಯೋಜನೆಯ ಮಾರ್ಗಸೂಚಿ ಕುರಿತಂತೆ ಹಿಂದೆ ಸರ್ಕಾರದಿಂದ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 311 Exp-1/18, dated: 26.09.2018 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 27 ಎಫ್‌ಆರ್‌ಓ 2018, ದಿ: 14.08.2018 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸುಮತಿ ಎಸ್.) 27.10.18
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.**

**ಪ್ರತಿಯನ್ನು:**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
3) ಪ್ರಧಾನ ಮಹಾಲೇಖಪಾಲರು (ಎ &ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4) ಆಯುಕ್ತರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ನಿರ್ದೇಶನಾಲಯ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–1.
5) ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ವಿ.ಐ.ಟಿ.ಸಿ. ಕಟ್ಟಡ, ಕಸ್ತೂರ್ ಬಾ ರಸ್ತೆ, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಲ (ನಿ), ನಂ. 953(ಎ), 2ನೇ ಮುಖ್ಯರಸ್ತೆ, 4ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು–10.
8) ಕಾರ್ಯದರ್ಶಿಗಳು, ಸಂಬಂಧಪಟ್ಟ ಪ್ರಾಥಮಿಕ ತೆಂಗಿನ ನಾರಿನ ಸಹಕಾರ ಸಂಘಗಳು (ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಮೂಲಕ).
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–1), ವಿಧಾನಸೌಧ, ಬೆಂಗಳೂರು.